**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.**

**ಸಿ.ಸಿ. ಸಂಃ 57/2020**

| | | |
|---|---|---|
| ಸಾಕ್ಷಿಯ ಹೆಸರುಃ | ಸಾಕಿಬ್ ಪಾಷ | ಫ್ರಾಸಾಃಃ 1 |
| ತಂದೆ ಹೆಸರುಃ | ಅಲ್ತಾಫ್ ಪಾಷ | ಚಾಸಾಃಃ 1 |
| ವಯಸ್ಸುಃ | 25 ವರ್ಷ | ಪ್ರಮಾಣೀಕರಿಸಿದ<br>ದಿಃ 23/03/2026 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಹಲಗನ ಹಳ್ಳಿ ಗ್ರಾಮ,<br>ಪಿರಿಯಾಪಟ್ಟಣ ತಾ. | |

**ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ**

ನನಗೆ ಆರೋಪಿತನ ಪರಿಚಯವಿದೆ. ನನಗೆ ಚಾಸಾ-2 ರಿಂದ 6 ರವರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಆರೋಪಿತರು ಯಾವತ್ತೂ ಸಹ ನನ್ನೊಂದಿಗೆ ಜಗಳ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ, ಕಬ್ಬಿಣದ ರಾಡಿನಿಂದ ಹಲ್ಲೆ ಮಾಡಿ ಗಾಯ ಉಂಟು ಮಾಡಿರುವುದಿಲ್ಲ. ಯಾವುದೇ ನಷ್ಟ ಉಂಟು ಮಾಡಿರುವುದಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿರುವುದಿಲ್ಲ.

ಈ ಸಂಬಂಧ ನಾನು ಆರೋಪಿತರ ವಿರುದ್ಧ ಯಾವುದೇ ದೂರು ನೀಡಿರುವುದಿಲ್ಲ. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.1** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಎ)** ಎಂದು ಗುರುತಿಸಲಾಯಿತು.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ದಿಃ 17.09.2019 ರಂದು ಮ. 12.30 ಗಂಟೆ ಸಮಯದಲ್ಲಿ ಹಲಗನಹಳ್ಳಿ ಗ್ರಾಮದ ಚಾಸಾ-5 ರವರ ಸ. ನಂ. 117/2 ರ ಜಮೀನಿನಲ್ಲಿ 1 ಮತ್ತು 2 ನೇ ಆರೋಪಿತರು ತಮ್ಮ ಬಾಬ್ತು ಕೆಎ-45-ಟಿಎ-3311 ಟ್ರ್ಯಾಕ್ಟರ್ ಅನ್ನು ಚಾಲನೆ ಮಾಡಿಕೊಂಡು ಬರುತ್ತಿದ್ದಾಗ ನಾನು ಟ್ರ್ಯಾಕ್ಟರ್ ಅನ್ನು ನಿಲ್ಲಿಸಿ ಏಕೆ ಈ ರೀತಿ ರಾಗಿ ಬಿತ್ತನೆ ಮಾಡಿದ ಜಮೀನಿನ ಮೇಲೆ ಟ್ರ್ಯಾಕ್ಟರ್ ಅನ್ನು ಓಡಿಸಿಕೊಂಡು ಬರುತ್ತಿದ್ದೀರಾ ಎಂದು ಕೇಳಿದಾಗ 1 ನೇ ಆರೋಪಿತ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 1 ನೇ ಆರೋಪಿತ ಟ್ರ್ಯಾಕ್ಟರ್ ಅನ್ನು ನನಗೆ ತಾಗಿಸಿ ಕೆಳಗೆ ಬೀಳಿಸಿ ಒಂದು ಕಬ್ಬಿಣದ ರಾಡಿನಿಂದ ನನ್ನ ಎಡ ಬುಜ, ಎಡಕೈ ತೋಳು ಮತ್ತು ಎದೆ ಮತ್ತು ಎಡ ಮುಂಗೈಗೆ ಬಲವಾಗಿ ಹೊಡೆದು ಗಾಯ ಪಡಿಸಿದರು ಎಂದರೆ ಸರಿಯಲ್ಲ. ನನಗೆ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಟ್ರ್ಯಾಕ್ಟರ್ ಅನ್ನು ಬಿತ್ತನೆ ಮಾಡಿರುವ ಜಮೀನಿನ ಮೇಲೆ ಓಡಾಡಿಸಿ ಸುಮಾರು 800 ಬೆಳೆ ನಷ್ಟ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಏಟಾಗಿದ್ದ ನನ್ನನ್ನು ಚಾಸಾ-2 ಮತ್ತು 3 ರವರು ಮನೆ ಬಳಿಗೆ ಕರೆದುಕೊಂಡು ಹೋದಾಗ 2 ನೇ ಆರೋಪಿತ ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಸಂಬಂಧ ನಾನು ಮೈಸೂರಿನ ಕೆ ಆರ್ ಆಸ್ಪತ್ರೆ ಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಪೊಲೀಸ್‌ರು ನನ್ನ ಹೇಳಿಕೆ ದೂರನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿತರೊಂದಿಗೆ ರಾಜೀ ಮಾಡಿಕೊಂಡಿರುತ್ತೇನೆ ಎಂದರೆ ಸರಿ. ಆದ್ದರಿಂದ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ</u>** ಇಲ್ಲ.

**ಮರು ವಿಚಾರಣೆಃ** ಇಲ್ಲ.

**<u>ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>**

**<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>**

**1 ನೇ ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**